ಕರ್ನಾಟಕ ಸರ್ಕಾರ
ಸಮಗ್ರ ಮಕ್ಕಳ ರಕ್ಷಣಾ ಯೋಜನೆ
C/o ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒಂದನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ॥ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001, ಕರ್ನಾಟಕ
E-mail ID:icps.kar@gmail.com Phone No: 080-22879381

No:ಕರಾಸಮರಸೊ/ಐಇಸಿ/DIU-ICPS/15/2020-21 Date:07-08-2020

ಗೆ,
ಯೋಜನಾ ನಿರ್ದೇಶಕರು,
ಇ ಕಛೇರಿ
ಇ-ಆಡಳಿತ ಕೇಂದ್ರ,
ಬೆಂಗಳೂರು.

ಮಾನ್ಯರೇ,

**ವಿಷಯ:** ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಸರ್ಕಾರ & ಸರ್ಕಾರ ಅನುದಾನಿತ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಇ-ಆಡಳಿತ ವ್ಯವಸ್ಥೆಯನ್ನು ಜಾರಿಗೊಳಿಸುವ ಬಗ್ಗೆ.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯು ನಿರ್ಲಕ್ಷತೆಗೊಳಗಾದ, ಪರಿತ್ಯಜಿಸಲ್ಪಟ್ಟ, ದೌರ್ಜನ್ಯಕ್ಕೆ ಒಳಗಾದ, ಶೋಷಣೆಗೆ ಒಳಗಾದ ಮತ್ತು ಕುಟುಂಬದಿಂದ ಬೇರ್ಪಟ್ಟ ಮಕ್ಕಳು ದುರ್ಬಲ ಸ್ಥಿತಿಗೆ ತಲುಪದಿರುವಂತೆ ತಡೆಯಲು ಹಾಗೂ ಇಂತಹ ಪ್ರಕರಣಗಳನ್ನು ಕಡಿಮೆ ಮಾಡಲು ಮತ್ತು ಸಂಕಷ್ಟದಲ್ಲಿರುವ ಮಕ್ಕಳ ಪರಿಸ್ಥಿತಿಯನ್ನು ಉತ್ತಮಪಡಿಸುವ ಉದ್ದೇಶವನ್ನು ಹೊಂದಿರುತ್ತದೆ. ರಾಜ್ಯದಲ್ಲಿ ಮಕ್ಕಳ ಪಾಲನೆ, ಪೋಷಣೆ ಮತ್ತು ರಕ್ಷಣೆ ಕುರಿತಂತೆ 30 ಜಿಲ್ಲೆಗಳಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಸರ್ಕಾರ & ಸರ್ಕಾರ ಅನುದಾನಿತ ಬಾಲಮಂದಿರ, ವೀಕ್ಷಣಾಲಯಗಳನ್ನು ಕಾರ್ಯನಿರ್ವಹಿಸುತ್ತಿದೆ.

ಮುಂದುವರೆದು ಕಛೇರಿ ಹಾಗೂ ಸಂಸ್ಥೆಗಳಲ್ಲಿ ಎಲ್ಲಾ ಆಡಳಿತ ವ್ಯವಸ್ಥೆಯು ಪಾರದರ್ಶಕತೆ, ಹಾಗೂ ಕಛೇರಿಯ ಕೆಲಸಗಳು ಸುಗಮವಾಗಿ ನಡೆಸುವುದು ಅವಶ್ಯಕವಾಗಿರುತ್ತದೆ. ಆದ್ದರಿಂದ 30 ಜಿಲ್ಲೆಗಳ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಸರ್ಕಾರ & ಸರ್ಕಾರ ಅನುದಾನಿತ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿ ಇ-ಆಡಳಿತ ವ್ಯವಸ್ಥೆಯನ್ನು ಜಾರಿಗೊಳಿಸಬೇಕಾಗಿದ್ದು ಮೇಲ್ಕಂಡ ಎಲ್ಲಾ ಕಛೇರಿ/ಸಂಸ್ಥೆಗಳಿಗೆ ಇ-ಆಡಳಿತ ವ್ಯವಸ್ಥೆಯ ಪ್ರಕ್ರಿಯೆಯನ್ನು ಒದಗಿಸಲು ಕೋರಲಾಗಿದೆ. ಈ ಉದ್ದೇಶಕ್ಕಾಗಿ ಒಬ್ಬ ನೋಡಲ್ ಅಧಿಕಾರಿಯನ್ನು ನೇಮಿಸಲು ಸಹ ವಿನಂತಿಸಲಾಗಿದೆ.

ತಮ್ಮ ವಿಶ್ವಾಸಿ,
11.08.2020
ನಿರ್ದೇಶಕರು,
ಸಮಗ್ರ ಮಕ್ಕಳ ರಕ್ಷಣಾ ಯೋಜನೆ,
ಬೆಂಗಳೂರು.

**ಪ್ರತಿಯನ್ನು:** ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, 30 ಜಿಲ್ಲೆ ಇವರುಗಳ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

No_01-2018-19_TCP _6